ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯಕಾಲ ದಿನಾಂಕ : DATE : 30/12/2019

# ಜಾರ್ಖಂಡ್‌ಗೀಗ ಸೊರೇನ್ ಸಾರಥ್ಯ

## 11ನೇ ಸಿಎಂ ಆಗಿ ಪ್ರಮಾಣ ಸ್ವೀಕಾರ

ರಾಂಚಿ: ಜಾರ್ಖಂಡ್‌ನ 11ನೇ ಮುಖ್ಯಮಂತ್ರಿಯಾಗಿ ಜೆಎಂಎಂ(ಜಾರ್ಖಂಡ್ ಮುಕ್ತಿ ಮೋರ್ಚಾ) ನಾಯಕ ಹೇಮಂತ್ ಸೋರೇನ್ ಅವರು ಭಾನುವಾರ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಪ್ರತಿಪಕ್ಷಗಳ ಪ್ರಮುಖ ನಾಯಕರ ಸಮ್ಮುಖದಲ್ಲಿ ಸೋರೇನ್ 2ನೇ ಬಾರಿಗೆ ಸಿಎಂ ಆಗಿ ಪದಗ್ರಹಣ ಮಾಡಿದ್ದು, ರಾಜ್ಯಪಾಲರಾದ ದ್ರೌಪದಿ ಮುರ್ಮು ಅವರು ಪ್ರಮಾಣ ಬೋಧಿಸಿದ್ದಾರೆ.

ಸೋರೇನ್ ಜೊತೆಗೆ ಕಾಂಗ್ರೆಸ್ ನಾಯಕ ಹಾಗೂ ಅಸೆಂಬ್ಲಿಯ ಮಾಜಿ ಸ್ಪೀಕರ್ ಅಲಂಗಿರ್ ಆಲಂ, ಜಾರ್ಖಂಡ್ ಪಿಸಿಸಿ ಅಧ್ಯಕ್ಷ ರಾಮೇಶ್ವರ್ ಓರವೋನ್ ಮತ್ತು ಆರ್‌ಜೆಡಿ ಶಾಸಕ ಸತ್ಯಾನಂದ್ ಭೋಕ್ತಾ ಅವರು ಸಚಿವರಾಗಿ ಪ್ರಮಾಣ ಸ್ವೀಕರಿಸಿದ್ದಾರೆ.

**ಒಗ್ಗಟ್ಟು ಪ್ರದರ್ಶನ:** ಕಾಂಗ್ರೆಸ್ ನಾಯಕ ರಾಹುಲ್‌ಗಾಂಧಿ, ಟಿಎಂಸಿ ನಾಯಕಿ ಮಮತಾ ಬ್ಯಾನರ್ಜಿ, ರಾಜಸ್ಥಾನ ಸಿಎಂ ಅಶೋಕ್ ಗೆಹ್ಲೋಟ್, ಛತ್ತೀಸ್‌ಗಢ ಸಿಎಂ ಭೂಪೇಶ್ ಬಘೇಲ್, ಸಿಪಿಎಂ ಪ್ರಧಾನ ಕಾರ್ಯದರ್ಶಿ ಸೀತಾರಾಂ ಯೆಚೂರಿ, ಡಿಎಂಕೆ ನಾಯಕ ಎಂ.ಕೆ.ಸ್ಟಾಲಿನ್, ಸಂಸದೆ ಕನಿಮೋಳಿ, ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಸೇರಿದಂತೆ ಪ್ರತಿಪಕ್ಷಗಳ ಪ್ರಮುಖರು ಸೋರೇನ್ ಪದಗ್ರಹಣ ಸಮಾರಂಭದಲ್ಲಿ ಪಾಲ್ಗೊಂಡಿದ್ದರು. ಈ ಮೂಲಕ, ಎರಡನೇ ಬಾರಿಗೆ ಪ್ರತಿಪಕ್ಷಗಳು ಬಲ ಪ್ರದರ್ಶನ ಮಾಡಿವೆ. ಈ ಹಿಂದೆ ಅಂದರೆ ಕಳೆದ ವರ್ಷ ಕರ್ನಾಟಕದಲ್ಲಿ ಕಾಂಗ್ರೆಸ್-ಜೆಡಿಎಸ್ ಸಮ್ಮಿಶ್ರ ಸರ್ಕಾರ ಅಸ್ತಿತ್ವಕ್ಕೆ ಬಂದಿದ್ದಾಗಲೂ, ಎಚ್.ಡಿ. ಕುಮಾರಸ್ವಾಮಿ ಅವರ ಪದಗ್ರಹಣ ಸಮಾರಂಭದಲ್ಲಿ ಈ ಎಲ್ಲ ನಾಯಕರು ಪಾಲ್ಗೊಳ್ಳುವ ಮೂಲಕ ಒಗ್ಗಟ್ಟು ಪ್ರದರ್ಶಿಸಿದ್ದರು.

ವಿಶೇಷವೆಂದರೆ, ಈ ಕಾರ್ಯಕ್ರಮದಲ್ಲಿ ಶಿವಸೇನೆ ನಾಯಕ, ಮಹಾರಾಷ್ಟ್ರ ಸಿಎಂ ಉದ್ಧವ್ ಠಾಕ್ರೆ ಭಾಗವಹಿಸಿರಲಿಲ್ಲ.

ಇತ್ತೀಚೆಗೆ ನಡೆದಿದ್ದ ಚುನಾವಣೆಯಲ್ಲಿ 81 ವಿಧಾನಸಭಾ ಕ್ಷೇತ್ರಗಳ ಪೈಕಿ ಜೆಎಂಎಂ-ಕಾಂಗ್ರೆಸ್-ಆರ್‌ಜೆಡಿ ಮೈತ್ರಿಕೂಟ 47 ಸೀಟುಗಳನ್ನು ಗೆದ್ದಿತ್ತು. ಇದಲ್ಲದೆ, ನಾಲ್ವರು ಇತರೆ ಶಾಸಕರು ಕೂಡ ಮೈತ್ರಿ ಸರ್ಕಾರಕ್ಕೆ ಬೆಂಬಲ ಘೋಷಿಸಿದ್ದರು.

**ಮೋದಿ ಅಭಿನಂದನೆ:** ಸಿಎಂ ಆಗಿ ಪ್ರಮಾಣ ಸ್ವೀಕರಿಸಿದ ಹೇಮಂತ್ ಸೋರೇನ್‌ರಿಗೆ ಅಭಿನಂದಿಸಿರುವ ಪ್ರಧಾನಿ ಮೋದಿ, ರಾಜ್ಯದ ಅಭಿವೃದ್ಧಿಗೆ ಅಗತ್ಯವಿರುವ ಎಲ್ಲ ಸಹಾಯಗಳನ್ನೂ ಮಾಡುವುದಾಗಿ ಆಶ್ವಾಸನೆ ನೀಡಿದ್ದಾರೆ.



ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹಾಗೂ ತಂದೆ ಶಿಬು ಸೋರೇನ್ ಜತೆ ಜಾರ್ಖಂಡ್ ಸಿಎಂ ಹೇಮಂತ್ ಸೋರೇನ್ ಅಭಿಮಾನಿಗಳತ್ತ ಕೈಬೀಸಿದರು.